ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 22ನೇ ಸೆಪ್ಟಂಬರ್, 2020

ಬೀದರ್ ಜಿಲ್ಲೆಯಲ್ಲಿ ನಡೆಯುತ್ತಿರುವ ಯುಜಿಡಿ ಮತ್ತು 24/7 ಕಾಮಗಾರಿಗಳ ಬಗ್ಗೆ

ಶ್ರೀ ಅರವಿಂದ ಕುಮಾರ್‌ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು):-

147 (259) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೀದರ್ ನಗರದಲ್ಲಿ ಜರುಗುತ್ತಿರುವ ಒಳಚರಂಡಿ ಮತ್ತು 24/7 ಕುಡಿಯುವ ನೀರು ಸರಬರಾಜು ಕಾಮಗಾರಿ ಕಳಪೆ ಮಟ್ಟದಿಂದ ಕೂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ತನಿಖೆಗೆ ಸರ್ಕಾರ ಕ್ರಮ ಕೈಗೊಳ್ಳುವುದೆಯೇ ;

(ಆ) ಸದರಿ ಕಾಮಗಾರಿಗಳಿಗೆ ಸರ್ಕಾರದಿಂದ ಒಟ್ಟು ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; ಇಲ್ಲಿಯವರೆಗೆ ಎಷ್ಟು ಕಿ.ಮೀ. ಕಾಮಗಾರಿ ಮುಗಿದಿದೆ ; ಇದಕ್ಕಾಗಿ ಎಷ್ಟು ಹಣ ಖರ್ಚು ಮಾಡಲಾಗಿದೆ ? (ವಿವರವಾದ ಮಾಹಿತಿ ನೀಡುವುದು)